**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 293/2021**

ಪಿ.ಡಬ್ಲ್ಯೂಃ 2

ಸಿ.ಡಬ್ಲ್ಯೂಃ 2

ಸಾಕ್ಷಿದಾರರ ಹೆಸರು ಃ ಚರಣ್

ತಂದೆಯ ಹೆಸರುಃ ಃ ಅಣ್ಣಪ್ಪ

ವಯಸ್ಸು ಃ **23 ವರ್ಷ**

ಉದ್ಯೋಗ ಃ ವಿದ್ಯಾರ್ಥಿ

ವಾಸಸ್ಥಳ ಃ ರಂಗೇನಹಳ್ಳಿ

**ದಿನಾಂಕ: 11-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ನಾಲ್ಕು ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ಮಧ್ಯಾಹ್ನ 12-00 ಗಂಟೆ ಸಮಯದಲ್ಲಿ ನನ್ನ ಬೈಕ್ ಬಿಡಿಸಿಕೊಂಡು ಬರಲು ಹೋದಾಗ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-6 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ 15-05-2020 ರಂದು ಬೆಳಿಗ್ಗೆ 9-50 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣೆಯ ಸರಹದ್ದಿನಲ್ಲಿ ಆರೋಪಿಯು ಯಾವುದೇ ಪರವಾನಗಿಯನ್ನು ಪಡೆಯದೇ ಮತ್ತು ಸರ್ಕಾರಕ್ಕೆ ರಾಜಧನವನ್ನು ಪಾವತಿಸದೇಭದ್ರಾ ಹೊಳೆಯಿಂದ ಅಕ್ರಮವಾಗಿ ಕಳ್ಳತನದಿಂದ 1750/- ಬೆಲೆ ಬಾಳುವ ಮರಳನ್ನು ತೆಗೆದು ಮಾರಾಟ ಮಾಡುತ್ತಿದ್ದ ವಿಚಾರವಾಗಿ ಅದೇ ದಿನ 10-00 ಗಂಟೆಗೆ ಪೊಲೀಸರು

ಮಹಜರ್ ಮಾಡಿದ್ದು ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆ, ಆದರೆ ನನಗೆ ಯಾವುದೇ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇಲ್ಲ

**ಮರುವಿಚಾರಣೆ:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**